**1 ನೇ ಹೆಚ್ಚುವರಿ ವಿಶೇಷ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,**
**ಚಿಕ್ಕಮಗಳೂರು**

ಸತ್ರ ಮೊಕದ್ದಮೆ ನಂಃ 145/2024

| | | | |
|---|---|---|---|
| ಸಾಕ್ಷಿದಾರರ ಹೆಸರು | - | ಸ್ವಾಮಿ | ಪಿಡಬ್ಲೂ -02 |
| ತಂದೆಯ ಹೆಸರು | - | ದೇವರಾಜು | ಸಿಡಬ್ಲೂ -04 |
| ವಯಸ್ಸು | - | 49 ವರ್ಷ | |
| ಉದ್ಯೋಗ | - | ಕೂಲಿ ಕೆಲಸ | |
| ವಾಸ ಸ್ಥಳ | - | ತರೀಕೆರೆ | |

ದಿನಾಂಕಃ 25-03-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ : ವಿಶೇಷ ಸರ್ಕಾರಿ ಅಭಿಯೋಜಕರಿಂದ-

1. ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿತರು ಯಾರೆಂದು ನನಗೆ ಗೊತ್ತಿಲ್ಲ. ನಾನು ಅವರನ್ನು ಈ ಹಿಂದೆ ನೋಡಿಲ್ಲ. ಫ್ರಾಸಾ.1 ಗೊತ್ತು. ಚಾಸಾ.5 ಗೊತ್ತಿಲ್ಲ.
2. ಆರೋಪಿತರಿಂದ ಫ್ರಾಸಾ.1 ರವರಿಗೆ ಏನು ತೊಂದರೆಯಾಗಿದೆ ಎಂದು ನನಗೆ ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಪೊಲೀಸರು ನನ್ನನ್ನು ವಿಚಾರಿಸಿಲ್ಲ ಮತ್ತು ನಾನು ಅವರಿಗೆ ಯಾವುದೇ ಹೇಳಿಕೆಯನ್ನು ನೀಡಿಲ್ಲ.

   (ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರು ಅನುಮತಿ ಕೇಳಿರುತ್ತಾರೆ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ವಿಶೇಷ ಸರ್ಕಾರಿ ಅಭಿಯೋಜಕರಿಂದಃ-</u>

3. ಫ್ರಾಸಾ.1 ರವರು ಹಳಿಯೂರು ಗ್ರಾಮದ ಹತ್ತಿರ ಇರುವ ಅಡಿಕೆ ತೋಟವನ್ನು ಸುಮಾರು 5-6 ವರ್ಷಗಳಿಂದ ಗೇಣಿ ಮಾಡಿಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಅಡಿಕೆ ತೋಟದ ಪಕ್ಕದಲ್ಲಿರುವ ಜಮೀನು ಸಹ ಫ್ರಾಸಾ.1 ರವರ ಸ್ವಾಧೀನದಲ್ಲಿರುತ್ತದ ಎಂದರೆ ನನಗೆ ಗೊತ್ತಿಲ್ಲ. ಫ್ರಾಸಾ.1 ರವರು ಸ್ವಾಧೀನದಲ್ಲಿರುವ ಜಮೀನಿಗೆ ದಿನಾಂಕ 03.07.2023 ರಂದು ಬೆಳಿಗ್ಗೆ 9.30 ಗಂಟೆ ಸಮಯದಲ್ಲಿ ನಾನು ಚಾಸಾ.5 ರವರೊಂದಿಗೆ ಹೋಗಿದ್ದೆನು ಎಂದರೆ ಸರಿಯಲ್ಲ. ಆ ಸಮಯದಲ್ಲಿ 1 ರಿಂದ 3 ನೇ ಆರೋಪಿತರು ಅಲ್ಲಿಗೆ ಬಂದು ಇದು ನಮ್ಮ ಜಮೀನು ಇಲ್ಲಿ ಯಾವುದೇ ಬೆಳೆ ಬೆಳೆದರೂ ಜೆ ಸಿ ಬಿ ಯಿಂದ ಹಾಳು ಮಾಡು, ಏನೆ ಬಂದರೂ ನಾವು ನೋಡಿಕೊಳ್ಳುತ್ತೇವೆ ಎಂದು 4 ನೇ ಆರೋಪಿಗೆ ಕುಮ್ಮಕ್ಕು ನೀಡಿದರು ಎಂದರೆ ಸರಿಯಲ್ಲ. ಫ್ರಾಸಾ.1 ರವರ ಸರ್ವೆ ನಂಬರ್ 202 ರ ಅಡಿಕೆ ತೋಟಕ್ಕೆ ಆರೋಪಿತರು ಅತಿಕ್ರಮ ಪ್ರವೇಶ ಮಾಡಿದ್ದರು ಎಂದರೆ ಸರಿಯಲ್ಲ. ನಂತರ ಆ ಬಗ್ಗೆ ಫ್ರಾಸಾ.1 ರವರು ಆರೋಪಿತರ ವಿರುದ್ಧ ತರೀಕೆರೆ ಪೊಲೀಸರಿಗೆ ದೂರು ಕೊಟ್ಟ ವಿಚಾರ ತಿಳಿಯಿತು ಎಂದರೆ ಸರಿಯಲ್ಲ.

4. ನಂತರ ದಿನಾಂಕ 21.07.2023 ರಂದು ಪೊಲೀಸರು ನನ್ನನ್ನು ವಿಚಾರಿಸಿದ್ದಾರೆ ಎಂದರೆ ಸರಿಯಲ್ಲ. ಆಗ ನಾನು ಅವರಿಗೆ ಮೇಲೆ ಹೇಳಿದ ವಿಚಾರಗಳನ್ನು ತಿಳಿಸಿ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಸಾಕ್ಷಿಯ ಹೇಳಿಕೆಯನ್ನು ನಿಪಿ.6 ಎಂದು ಗುರುತಿಸಲಾಯಿತು.

5. ಘಟನೆಯ ಬಗ್ಗೆ ಮಾಹಿತಿ ಇದ್ದು ಆ ಬಗ್ಗೆ ಪೊಲೀಸರಿಗೆ ನಿಪಿ.6 ರಂತೆ ಹೇಳಿಕೆಯನ್ನು ನೀಡಿದ್ದರೂ ಸಹ ಈಗ

ಆರೋಪಿತರೊಂದಿಗೆ ಶಾಮೀಲಾಗಿ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ.

ಪಾಟೀ ಸವಾಲು: ಆರೋಪಿತರ ಪರ ಶ್ರೀ ಹೆಚ್ ಎಸ್ ವಕೀಲರು ಸಾಕ್ಷಿಯ ಪಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
1 ನೇ ಹೆಚ್ಚುವರಿ ವಿಶೇಷ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ